# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **652** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | **13/12/2024** |
| **ಉತ್ತರಿಸುವವರು** | **ಮಾನ್ಯ ಕಾರ್ಮಿಕ ಸಚಿವರು** |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ವೈದ್ಯಕೀಯ ಸಹಾಯಧನ/ ಪ್ರಮುಖ ಖಾಯಿಲೆಗಳ ಚಿಕಿತ್ಸಾ ವೆಚ್ಚ ಹಾಗೂ ಅಪಘಾತ ಚಿಕಿತ್ಸಾ ವೆಚ್ಚದಲ್ಲಿ ಈಗ ಸಿಗುತ್ತಿರುವ ಸಹಾಯಧನಗಳು ತೀರಾ ಅತ್ಯಲ್ಪ ಹಾಗೂ ನಗಣ್ಯವಾಗಿರುವುದರಿಂದ, ಕಾರ್ಮಿಕರು ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td rowspan="2">ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಪ್ರಸ್ತುತ ಈ ಕೆಳಕಂಡ ವೈದ್ಯಕೀಯ ಸಹಾಯ ಧನ ನೀಡಲಾಗುತ್ತಿದೆ.<br>1. ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ): ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ ರೂ. 300/- ರಿಂದ ರೂ. 20,000/-ವರೆಗೆ<br>2. ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ): ರೂ.2,00,000/-ಗಳ ವರೆಗೆ.<br><br>ಮುಂದುವರೆದು, ದಿನಾಂಕ:28-10-2024 ರಂದು ನಡೆದ ಮಂಡಳಿಯ 43 ನೆಯ ಸಭೆಯಲ್ಲಿ ಫಲಾನುಭವಿಗಳಿಗೆ ಚಿಕಿತ್ಸಾ ವೆಚ್ಚಕ್ಕೆ ಸಂಬಂಧಿಸಿದಂತೆ ಅನುಕೂಲವಾಗುವಂತೆ ಈ ಕೆಳಕಂಡ ನಿರ್ಣಯ ಕೈಗೊಳ್ಳಲಾಗಿದೆ.<br><br>1. ನಿಯಮ 48 ರಲ್ಲಿ ಪ್ರಮುಖ ವೈದ್ಯಕೀಯ ವೆಚ್ಚ ಮರುಪಾವತಿಗಾಗಿ ನಿಗಧಿಪಡಿಸಿರುವ ಗರಿಷ್ಠ ರೂ.2.00 ಲಕ್ಷದ ಮಿತಿಯವರೆಗೆ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಬಿತರು ಸರ್ಕಾರದ ವೈದ್ಯಕೀಯ ಸಂಸ್ಥೆಗಳು, ಸರ್ಕಾರದ ವೈದ್ಯಕೀಯ ಕಾಲೇಜುಗಳಲ್ಲಿ ನೋಂದಾಯಿತ ಫಲಾನುಭವಿಗಳು ಮತ್ತು ಅವರ ಅವಲಂಬಿತರಿಗೆ ಸಿಜಿಹೆಚ್‌ಎಸ್ ದರಗಳನ್ವಯ ನಗದುರಹಿತ ಚಿಕಿತ್ಸೆ ಪಡೆಯಲು ಅವಕಾಶ ಕಲ್ಪಿಸಲು ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ.</td></tr>
<tr><td>ಆ)</td><td>ಬಂದಿದ್ದಲ್ಲಿ ಆಸ್ಪತ್ರೆಯ ಚಿಕಿತ್ಸಾ ವೆಚ್ಚ ಸಂಪೂರ್ಣ ನಗದು ರಹಿತ ಸೇವೆಯ ಮೂಲಕ ಪೂರ್ಣ ಪ್ರಮಾಣದಲ್ಲಿ ಕಾರ್ಮಿಕರಿಗೆ ಲಭಿಸುವಂತೆ ಸರ್ಕಾರ ಕ್ರಮ ವಹಿಸಿದೆಯೇ;</td></tr>
</table>

| | | |
|---|---|---|
| | | 2. ಹೃದ್ರೋಗ ಮತ್ತು ಕ್ಯಾನ್ಸರ್ ಕಾಯಿಲೆಗಳಿಗೆ ನೋಂದಾಯಿತ ಫಲಾನುಭವಿಗಳು ಹಾಗೂ ಅವರ ಅವಲಂಬಿತರು ಚಿಕಿತ್ಸೆ ಪಡೆದಲ್ಲಿ, ಚಿಕಿತ್ಸೆ ಹಾಗೂ ಔಷಧಿಗಳ ವೆಚ್ಚವನ್ನು ಮರುಪಾವತಿ ಮೊತ್ತವನ್ನು ರೂ.5.00 ಲಕ್ಷಕ್ಕೆ ಹೆಚ್ಚಿಸಲು ನಿರ್ಣಯಿಸಲಾಗಿರುತ್ತದೆ<br>3. ನೋಂದಾಯಿತ ಫಲಾನುಭವಿಗಳು ರಸ್ತೆ ಹಾಗೂ ವಾಹನ ಅಪಘಾತಕ್ಕೆ ಒಳಗಾಗಿ ಯಾವುದೇ ಆಸ್ಪತ್ರೆಯಲ್ಲಿ ಚಿಕಿತ್ಸೆಯನ್ನು ಪಡೆದಿದ್ದಲ್ಲಿ ಅಥವಾ ನಿರ್ಮಾಣ ಕಾಮಗಾರಿ ನಡೆಯುತ್ತಿರುವ ಸ್ಥಳಗಳಲ್ಲಿ ಅಪಘಾತ ಉಂಟಾಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಲ್ಲಿ ಉಂಟಾಗುವ ವೈಧ್ಯಕೀಯ ವೆಚ್ಚವನ್ನು ಸಿಜಿಹೆಚ್ಎಸ್ ದರಗಳನ್ವಯ ಮಂಡಳಿಯ ಫಲಾನುಭವಿಗಳಿಗೆ ವೈಧ್ಯಕೀಯ ಸಹಾಯ ಧನ ನೀಡಲಾಗುವುದು. |
| ಇ) | ಕಾರ್ಮಿಕರಿಗೆ ಕೆಲಸದ ಸ್ಥಳದಲ್ಲಿ ಅಪಘಾತವಾದ ನಂತರ ವಿಶ್ರಾಂತಿಯ ಅವಶ್ಯಕತೆ ಇದ್ದು, ಆದರೆ ಇದೀಗ ಮಂಡಳಿಯಲ್ಲಿ ಅಪಘಾತ ಪರಿಹಾರ ಮತ್ತು ಪಿಂಚಣಿಯು ಅಪಘಾತದ ನಂತರದ ವಿಶ್ರಾಂತಿಯ ಸಮಯದಲ್ಲಿ ದೊರೆಯದೆ ಇರುವುದರಿಂದ ನಿಯಮಾವಳಿಗಳಿಗೆ ಸರ್ಕಾರ ಸೂಕ್ತ ಬದಲಾವಣೆ ತರುವುದೇ; | ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು,2006 ರ ನಿಯಮ 47 ರಡಿ ಮಂಡಳಿಯ ವತಿಯಿಂದ ಫಲಾನುಭವಿಗಳು ಅಪಘಾತದಿಂದಾಗಿ ಮರಣ ಹೊಂದಿದ್ದಲ್ಲಿ **ರೂ. 5,00,000/-ಗಳ** ಪರಿಹಾರ ಹಾಗೂ ಅಪಘಾತದಿಂದಾಗಿ ದುರ್ಬಲತೆ ಯಾಗಿದ್ದಲ್ಲಿ ನಿಯಮ 40 ರಡಿ ರೂ. 2,00,000/- ಗಳ ಅನುಗ್ರಹರಾಶಿ ಹಾಗೂ ಮಾಸಿಕವಾಗಿ ರೂ.2,000/- ಗಳಂತೆ ದುರ್ಬಲತೆ ಪಿಂಚಣಿ ಸೌಲಭ್ಯವನ್ನು ಈಗಾಗಲೇ ನೀಡಲಾಗುತ್ತಿದೆ. |
| ಈ) | ಕಾರ್ಮಿಕರ ಬಹುಕಾಲದ ಬೇಡಿಕೆಗಳಾದ ಕಾರ್ಮಿಕರ ವೃದ್ಯಾಪ್ಯ ಪಿಂಚಣಿ, ಜೀವ ವಿಮೆ, ವಿಧವಾ ವೇತನ ಹಾಗೂ ಮರಣವಾದ ಕಾರ್ಮಿಕರ ಮಕ್ಕಳ ಹಾಗೂ ಅವಲಂಬಿತರ ಭವಿಷ್ಯಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಹಾಗೂ ಅವರ ಅವಲಂಭಿತರಿಗಾಗಿ ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರವನ್ನು **ಅನುಬಂಧ-01** ರಲ್ಲಿ ಲಗತ್ತಿಸಿದೆ. |

**ಕಾಇ 556 ಎಲ್ಇಟಿ 2024**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

<u>ಅನುಬಂಧ -1</u>

## ಮಂಡಳಿಯ ವತಿಯಿಂದ ಅನುಷ್ಠಾನಗೊಳಿಸಿರುವ ಸೌಲಭ್ಯಗಳು ಮಂಡಳಿಯ ನೋಂದಾಯಿತ ಫಲಾನುಭವಿಗಳಿಗೆ ಮತ್ತು ಅವರ ಅವಲಂಭಿತರಿಗೆ ಸಹಾಯಧನ ನೀಡಲು ಈ ಕೆಳಕಂಡ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ರೂಪಿಸಲಾಗಿದೆ:

1. **ಪಿಂಚಣಿ ಸೌಲಭ್ಯ: ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರೈಸಿದ ಫಲಾನುಭವಿಗೆ ಮಾಸಿಕ ರೂ. 3,000/-**
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ. 2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ)
5. **ಟ್ರೈನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ. 50,000/-
8. **ಅಂತ್ಯಕ್ರಿಯೆ ವೆಚ್ಚ :ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ. 71,000/**-ಸಹಾಯಧನ
9. ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ): ಫಲಾನುಭವಿಯ ಇಬ್ಬರು ಮಕ್ಕಳ ವಿದ್ಯಾಭ್ಯಾಸಕ್ಕಾಗಿ:

| **ಕ್ರ. ಸಂ.** | **ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್)** | **ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ)** |
|---|---|---|
| 1 | 1 ರಿಂದ 5 ನೇ ತರಗತಿ | 1,800 |
| 2 | 6 ರಿಂದ 8 ನೇ ತರಗತಿ | 2,400 |
| 3 | 9 ಹಾಗೂ 10ನೇ ತರಗತಿ | 3,000 |
| 4 | ಪ್ರಥಮ ಪಿಯುಸಿ ಮತ್ತು ದ್ವಿತೀಯ ಪಿ.ಯು.ಸಿ | 4,600 |
| 5 | ಪದವಿ | 10,000 |
| 6 | ಬಿಇ / ಬಿ.ಟೆಕ್ ಅಥವಾ ಸಂಬಂಧಪಟ್ಟ ಯೂಜಿ ಕೋರ್ಸ್ | 10,000 |
| 7 | ಸ್ನಾತಕೋತ್ತರ ಪದವಿ | 10,000 |
| 8 | ಪಾಲಿಟೆಕ್ನಿಕ್ / ಡಿಪ್ಲಮಾ/ ಐಟಿಐ | 4,600 |
| 9 | ಬಿಎಸ್‌ಸಿ ನರ್ಸಿಂಗ್/ ಜಿಎನ್‌ಎಮ್/ ಎಎನ್‌ಎಮ್/ ಪಾರಮೆಡಿಕಲ್ ಕೋರ್ಸ್ / ಅಕ್ಸುಲರಿ ನರ್ಸಿಂಗ್ ಆಂಡ್ ಮಿಡ್ವೈಫ್ | 10,000 |
| 10 | ಬಿ.ಎಡ್ | 6,000 |
| 11 | ವೈದ್ಯಕೀಯ (ಎಮ್‌ಬಿಬಿಎಸ್ /ಬಿಎಎಮ್ ಎಸ್/ ಬಿಡಿಎಸ್ /ಬಿಹೆಚ್‌ಎಮ್ ಎಸ್ ಕೋರ್ಸ್ ಅಥವಾ ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್ | 11,000 |

| ಕ್ರ. ಸಂ. | ವಿದ್ಯಾಭ್ಯಾಸದ ವಿವರ (ತರಗತಿ ಅಥವಾ ಕೋರ್ಸ್ ಅಥವಾ ಗ್ರೇಡ್) | ವಾರ್ಷಿಕ ಶೈಕ್ಷಣಿಕ ಸಹಾಯಧನ ಮೊತ್ತ (ರೂ. ಗಳಲ್ಲಿ) |
|---|---|---|
| 12 | ಎಲ್‌ಎಲ್ ಬಿ/ಎಲ್ ಎಲ್ ಎಂ | 10,000 |
| 13 | ಎಮ್.ಟೆಕ್/ ಎಮ್ ಇ (ಇದಕ್ಕೆ ಸಂಬಂಧಪಟ್ಟ ಸಮಾನಾಂತರ ಸ್ನಾತಕೋತ್ತರ ಕೋರ್ಸ್) | 10,000 |
| 14 | ಎಮ್‌ಡಿ ಮೆಡಿಕಲ್ | 12,000 |
| 15 | ಪಿಹೆಚ್‌ಡಿ / ಎಮ್. ಫಿಲ್ (ಯಾವುದೇ ವಿಷಯ) | 11,000 |
| 16 | ಐಐಟಿ/ಐಐಐಟಿ/ ಐಐಎಮ್/ ಎನ್‌ಐಟಿ/ ಐಐಎಸ್‌ಇಆರ್/ಎಐಐಎಮ್‌ಎಸ್/ಎನ್‌ಎಲ್‌ಯೂ ಮತ್ತು ಭಾರತ ಸರ್ಕಾರದ ಮಾನ್ಯತೆ ಪಡೆದ ಕೋರ್ಸ್‌ಗಳು. | 11,000 |

10. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/-**ವರೆಗೆ
11. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಮರಣ ಹೊಂದಿದ್ದಲ್ಲಿ **ರೂ. 5,00,000/-**ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-**
12. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ**
13. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ.60,000/-**
14. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ.6,000/- ಗಳ** ಸಹಾಯಧನ